**All India Radio: Bangalore**
**Regional Bulletin In Kannada**
**10.08.2025 / 6.40 p.m.**
**ಆಕಾಶವಾಣಿ ಬೆಂಗಳೂರು**
**ಪ್ರದೇಶ ಸಮಾಚಾರ**
**10.08.2025 / 6.40 p.m.**
**<><><><>**

**ಮುಖ್ಯಾಂಶಗಳು**

೧. ದೇಶದ ಮಾಹಿತಿ ತಂತ್ರಜ್ಞಾನ, ರಕ್ಷಣಾ ಕ್ಷೇತ್ರಕ್ಕೆ ಬೆಂಗಳೂರಿನ ಕೊಡುಗೆ ಅಪಾರ - ಪ್ರಧಾನಿ ನರೇಂದ್ರ ಮೋದಿ

೨. ಮೆಟ್ರೋ ಕಾಮಗಾರಿಗೆ ಶೇಕಡ ೮೭ ರಷ್ಟು ರಾಜ್ಯದ ಅನುದಾನ - ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟನೆ

೩. ನಾಳೆಯಿಂದ ವಿಧಾನಮಂಡಲದ ಉಭಯ ಸದನಗಳ ಮುಂಗಾರು ಅಧಿವೇಶನ

೪. ಜಂಬೂಸವಾರಿಯ ಗಜಪಡೆಗಳಿಗೆ ಮೈಸೂರು ಅರಮನೆಯ ಆವರಣದಲ್ಲಿಂದು  ಸಾಂಪ್ರದಾಯಿಕ ಪೂಜೆ

೫. ರಾಜ್ಯದ ಹಲವೆಡೆ ಮುಂದಿನ ೭ ದಿನಗಳ ಕಾಲ ವ್ಯಾಪಕ ಮಳೆ ; ಬೆಂಗಳೂರಿಗೆ ಯೆಲ್ಲೋ ಅಲರ್ಟ್

><><><><><><><><><

ಆಪರೇಷನ್ ಸಿಂದೂರ್ ಸಮಯದಲ್ಲಿ ಪಾಕಿಸ್ತಾನವನ್ನು ಮಂಡಿಯೂರುವಂತೆ ಮಾಡಿದ ಹಾಗೂ ಭಾರತೀಯ ಸಶಸ್ತ್ರ ಪಡೆಗಳಿಗೆ ಅತ್ಯಾಧುನಿಕ ತಂತ್ರಜ್ಞಾನ ಪೂರೈಸಿದಕ್ಕಾಗಿ ಕರ್ನಾಟಕ ಮತ್ತು ಬೆಂಗಳೂರಿನ ಯುವಕರನ್ನು ಪ್ರಧಾನಿ ನರೇಂದ್ರ ಮೋದಿ ಶ್ಲಾಘಿಸಿದ್ದಾರೆ. ಬೆಂಗಳೂರಿನಲ್ಲಿಂದು ಮೆಟ್ರೋ ೩ನೇ ಹಂತದ ಹೊಸಹಳ್ಳಿಯಿಂದ ಕಡಬಗೆರೆವರೆಗಿನ ಮಾರ್ಗದ ಯೋಜನೆಗೆ ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿದ ಅವರು, ೨೧ನೇ ಶತಮಾನದಲ್ಲಿ ನಗರ ಯೋಜನೆ ಹಾಗೂ ಮೂಲಭೂತ ಸೌಕರ್ಯಗಳನ್ನು ಒದಗಿಸುವುದು ಮುಖ್ಯವಾಗಿದೆ. ಬೆಂಗಳೂರನ್ನು ಭವಿಷ್ಯಕ್ಕೆ ಅನುಕೂಲವಾಗುವಂತೆ ತಯಾರಿ ನಡೆಸುವ ಅಗತ್ಯವಿದೆ ಎಂದು ಅವರು ಪ್ರತಿಪಾದಿಸಿದ್ದಾರೆ.

**ಧ್ವನಿ : ನರೇಂದ್ರ ಮೋದಿ (೩೦ ಸೆಕೆಂಡ್‌ಗಳು)**

ಬೆಂಗಳೂರಿನಲ್ಲಿ ಮೆಟ್ರೋ ಹಳದಿ ರೈಲು ಮಾರ್ಗಕ್ಕೆ ಚಾಲನೆ ನೀಡಲಾಗಿದೆ. ಮೂರನೇ ಹಂತದ ಯೋಜನೆಗೂ ಶಂಕು ಸ್ಥಾಪನೆ ನೆರವೇರಿಸಲಾಗಿದೆ. ಬೆಂಗಳೂರಿನಿಂದ ಬೆಳಗಾವಿಗೆ ವಂದೇ ಭಾರತ್ ರೈಲಿಗೂ ಚಾಲನೆ ನೀಡಲಾಗಿದ್ದು, ಇದರಿಂದ ಲಕ್ಷಾಂತರ ಮಂದಿ ವ್ಯಾಪಾರಿಗಳಿಗೆ ಅನುಕೂಲವಾಗಲಿದೆ ಎಂದು ತಿಳಿಸಿದ್ದಾರೆ.

**ಧ್ವನಿ : ನರೇಂದ್ರ ಮೋದಿ (೩೦ ಸೆಕೆಂಡ್‌ಗಳು)**

ಇದಕ್ಕೂ ಮೊದಲು ಪ್ರಧಾನಿ ಮೆಟ್ರೋ ಹಳದಿ ರೈಲು ಮಾರ್ಗಕ್ಕೆ ರಾಗಿಗುಡ್ಡ ನಿಲ್ದಾಣದಲ್ಲಿ ಹಸಿರು ನಿಶಾನೆ ತೋರಿದರು. ಮೆಟ್ರೋ ನಿಲ್ದಾಣದಲ್ಲಿ ಕ್ಯೂಆರ್ ಕೋಡ್ ಸ್ಕ್ಯಾನ್ ಮಾಡುವ ಮೂಲಕ ಟಿಕೆಟ್ ಖರೀದಿಸಿ ಪ್ರಯಾಣಿಸಿದರು. ಈ ನಡುವೆ ಬೆಂಗಳೂರಿನ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ರೈಲು ನಿಲ್ದಾಣದಲ್ಲಿ ಪ್ರಧಾನಿ ಬೆಂಗಳೂರು-ಬೆಳಗಾವಿ ವಂದೇ ಭಾರತ್ ರೈಲು ಸೇರಿದಂತೆ ಮೂರು ವಂದೇ ಭಾರತ್ ರೈಲುಗಳಿಗೆ ಹಸಿರು ನಿಶಾನೆ

ತೋರಿದರು. ಅಮೃತ್‌ಸರ್-ಶ್ರೀ ಮಾತಾ ವೈಷ್ಣೋದೇವಿ ಕತ್ರಾ ಹಾಗೂ ನಾಗ್‌ಪುರ್-ಪುಣೆ ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲುಗಳಿಗೂ ವರ್ಚುವಲ್ ಮೂಲಕ ಚಾಲನೆ ನೀಡಿದರು.

><><><><><><><><><

೨೦೧೪ರಲ್ಲಿ ಕೇಂದ್ರದಲ್ಲಿ ಅಧಿಕಾರಕ್ಕೆ ಬಂದ ಬಳಿಕ ಕರ್ನಾಟಕದ ರೈಲ್ವೆ ಬಜೆಟ್ ೯ ಪಟ್ಟು ಏರಿಕೆಯಾಗಿದೆ ಎಂದು ಕೇಂದ್ರ ರೈಲ್ವೆ ಖಾತೆ ಸಚಿವ ಅಶ್ವಿನಿ ವೈಷ್ಣವ್ ಬೆಂಗಳೂರಿನಲ್ಲಿ ತಿಳಿಸಿದ್ದಾರೆ. ೨೦೧೪ರಲ್ಲಿ ರಾಜ್ಯದ ರೈಲ್ವೆ ಬಜೆಟ್ ೮೩೫ ಕೋಟಿಯಾಗಿತ್ತು. ಇದೀಗ ೭ ಸಾವಿರದ ೫೦೦ ಕೋಟಿ ಬಜೆಟ್ ಅನ್ನು ಪ್ರಧಾನಿ ರಾಜ್ಯಕ್ಕೆ ನೀಡಿದ್ದಾರೆ. ಬೆಂಗಳೂರು ಸಮೀಪದ ದೇವನಹಳ್ಳಿಯಲ್ಲಿ ಸ್ಮಾರ್ಟ್ ಫೋನ್ ತಯಾರಿಕೆಯ ಪ್ರಮುಖ ಘಟಕ ನಿರ್ಮಾಣಗೊಂಡಿದ್ದು, ಭಾರತ ಜಗತ್ತಿನ ೨ನೇ ಅತಿದೊಡ್ಡ ಮೊಬೈಲ್ ಫೋನ್ ರಫ್ತುದಾರ ರಾಷ್ಟ್ರವಾಗಿ ಹೊರ ಹೊಮ್ಮಿದೆ ಎಂದು ಹೇಳಿದ್ದಾರೆ.

><><><><><><><><><

ಮೆಟ್ರೋ ಯೋಜನೆಗೆ ರಾಜ್ಯ ಸರ್ಕಾರ ಶೇಕಡ ೮೭.೩೭ ರಷ್ಟು ಹಣ ನೀಡುತ್ತಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಮೆಟ್ರೋ ಯೋಜನೆಯ ೨ನೇ ಹಂತದ ಹಳದಿ ಮಾರ್ಗದ ಉದ್ಘಾಟನೆ ಹಾಗೂ ೩ನೇ ಹಂತದ ಯೋಜನೆ ಶಂಕು ಸ್ಥಾಪನೆ ಬಳಿಕ ಮಾತನಾಡಿದ ಅವರು, ಈ ಯೋಜನೆಯಲ್ಲಿ ಕೇಂದ್ರ ಸರ್ಕಾರದ ಪಾಲು ಶೇಕಡ ೧೨.೬೩ ರಷ್ಟಿದೆ ಎಂದು ಹೇಳಿದ್ದಾರೆ. ಕೇಂದ್ರ ಸರ್ಕಾರ ಹಣಕಾಸು ಮತ್ತು ತಾಂತ್ರಿಕ ನೆರವು ಒದಗಿಸುತ್ತಿದೆ. ರಾಜ್ಯ ಮತ್ತು ಕೇಂದ್ರ ಸರ್ಕಾರ ಶೇಕಡ ೫೦ರ ಅನುಪಾತದಲ್ಲಿ ಹೂಡಿಕೆ ಮಾಡಬೇಕು ಎಂದು ಒಪ್ಪಂದವಾಗಿದೆ. ಆದರೆ ರಾಜ್ಯದ ಮೇಲೆ ಶೇಕಡ ೮೭.೩೭ ರಷ್ಟು ಭಾರವಿದೆ ಎಂದು ಪ್ರಧಾನಿಗೆ ಮನವರಿಕೆ ಮಾಡಿದ್ದಾರೆ. ೨೦೩೦ರ ವೇಳೆಗೆ ಬೆಂಗಳೂರು ನಗರದಲ್ಲಿ ೨೨೦ ಕಿಲೋಮೀಟರ್ ಉದ್ದದ ಮಾರ್ಗ ಪೂರ್ಣಗೊಳಿಸಿ ೩೦ ಲಕ್ಷ ಜನರು ಪ್ರಯಾಣಿಸಲು ಮೂಲಸೌಕರ್ಯ ಕಲ್ಪಿಸುವುದು ಸರ್ಕಾರದ ಬದ್ಧತೆಯಾಗಿದೆ ಎಂದು ಪ್ರತಿಪಾದಿಸಿದ್ದಾರೆ.

><><><><><><><><><

ನಾಳೆಯಿಂದ ವಿಧಾನಮಂಡಲ ಉಭಯ ಸದನಗಳ ಮುಂಗಾರು ಅಧಿವೇಶನ ಆರಂಭವಾಗಲಿದೆ. ನಾಳೆಯಿಂದ ಇದೇ ೨೨ರವರೆಗೆ ಅಧಿವೇಶನ ನಡೆಯಲಿದ್ದು, ೨೪ಕ್ಕೂ ಹೆಚ್ಚು ಮಸೂದೆಗಳಿಗೆ ಸರ್ಕಾರ ಅಂಗೀಕಾರ ಪಡೆದುಕೊಳ್ಳುವ ಸಾಧ್ಯತೆಯಿದೆ. ಅಧಿವೇಶನದಲ್ಲಿ ಸರ್ಕಾರವನ್ನು ಇಕ್ಕಟ್ಟಿಗೆ ಸಿಲುಕಿಸಲು ಪ್ರತಿಪಕ್ಷಗಳಾದ ಬಿಜೆಪಿ ಹಾಗೂ ಜೆಡಿಎಸ್ ಬೆಂಗಳೂರಿನಲ್ಲಿ ಇಂದು ಸಭೆ ನಡೆಸಿದರು. ಅಧಿವೇಶನದಲ್ಲಿ ಧರ್ಮಸ್ಥಳ ಪ್ರಕರಣ, ಪರಿಶಿಷ್ಟ ಸಮುದಾಯದವರ ಒಳಮೀಸಲಾತಿ ಕುರಿತಂತೆ ಪ್ರಮುಖವಾಗಿ ಚರ್ಚೆ ನಡೆಯುವ ಸಾಧ್ಯತೆಯಿದೆ.

><><><><><><><><><

ವಿಶ್ವ ವಿಖ್ಯಾತ ನಾಡಹಬ್ಬ ದಸರಾ ಮಹೋತ್ಸವ ೨೦೨೫ರ ಜಂಬೂ ಸವಾರಿಯ ಗಜಪಡೆಗಳಿಗೆ ಇಂದು ಸಾಂಪ್ರದಾಯಿಕವಾಗಿ ಪೂಜೆ ಸಲ್ಲಿಸಲಾಗುತ್ತಿದೆ.  ಅಂಬಾವಿಲಾಸ ಅರಮನೆಯ ಜಯಮಾರ್ತಂಡ ದ್ವಾರದ ಬಳಿ ಸಕಲ ಸಿದ್ಧತೆ ಕೈಗೊಳ್ಳಲಾಗುತ್ತಿದ್ದು, ಕ್ಷಣಗಣನೆ ಆರಂಭವಾಗಿದೆ. ಚಿನ್ನದ ಅಂಬಾರಿ ಹೊರುವ ಅಭಿಮನ್ಯು, ಭೀಮ, ಕಂಜನ್, ಧನಂಜಯ, ಪ್ರಶಾಂತ, ಮಹೇಂದ್ರ ಆನೆಗಳು ಸೇರಿದಂತೆ ಒಟ್ಟು ೯ ಆನೆಗಳಿಗೆ ಮೈಸೂರು ಜಿಲ್ಲಾಡಳಿತದ ವತಿಯಿಂದ

ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ. ಮಹದೇವಪ್ಪ ಪುಷ್ಪಾರ್ಚನೆ ಮಾಡುವ ಮೂಲಕ ಸಾಂಪ್ರದಾಯಿಕ ಸ್ವಾಗತ ನೀಡಲಿದ್ದಾರೆ.

><><><><><><><><><

ಸ್ವಾತಂತ್ರ್ಯೋತ್ಸವದ ಅಂಗವಾಗಿ ಧಾರವಾಡದಲ್ಲಿ ನಡೆದ "ತಿರಂಗಾ ಯಾತ್ರೆ'ಯ ಬೈಕ್ ರ್‍ಯಾಲಿಗೆ ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ, ಹಾಗೂ ಶಾಸಕ ಮಹೇಶ ಟೆಂಗಿನಕಾಯಿ ಚಾಲನೆ ನೀಡಿದ್ದಾರೆ. ಹುಬ್ಬಳ್ಳಿಯಲ್ಲಿ ಬಿಜೆಪಿ ಯುವ ಮೋರ್ಚಾ ವತಿಯಿಂದ ವಿನೂತನ ಬೈಕ್ ರ್‍ಯಾಲಿ ಹಮ್ಮಿಕೊಳ್ಳಲಾಗಿದ್ದು, ಸಾವಿರಾರು ಜನ ಕಾರ್ಯಕರ್ತರು ಹಾಗೂ ಬಿಜೆಪಿ ಅಭಿಮಾನಿಗಳು ಬೈಕ್ ರ್‍ಯಾಲಿಯಲ್ಲಿ ಭಾಗವಹಿಸಿದ್ದರು. ಇದೇ ವೇಳೆ ಸೈನಿಕರನ್ನು ಸನ್ಮಾನಿಸಿ ಗೌರವಿಸಲಾಯಿತು.

><><><><><><><><><

ಚಿಕ್ಕಬಳ್ಳಾಪುರ ಜಿಲ್ಲೆಯ ವಿಶ್ವವಿಖ್ಯಾತ ನಂದಿಬೆಟ್ಟವನ್ನು ಮತ್ತಷ್ಟು ಅಭಿವೃದ್ಧಿ ಪಡಿಸಲು ಕ್ರಮಕೈಗೊಳ್ಳಲಾಗುವುದು ಎಂದು ಜಿಲ್ಲಾ ಉಸ್ತುವಾರಿ ಸಚಿವ ಉನ್ನತ ಶಿಕ್ಷಣ ಸಚಿವ ಡಾ.ಕೆ.ಸುಧಾಕರ್ ತಿಳಿಸಿದ್ದಾರೆ. ಜಿಲ್ಲಾಡಳಿತ, ಯುವಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಯೋಗದಲ್ಲಿ ಇಂದು ನಂದಿ ಬೆಟ್ಟ ಮುಂಗಾರು ಓಟ ಎಂಬ ಓಟದ ಸ್ಪರ್ಧೆಗೆ ಚಾಲನೆ ನೀಡಿ ಅವರು ಮಾತನಾಡಿದರು.  ರೋಪ್ ವೇ ನಿರ್ಮಾಣಕ್ಕೆ ಸರ್ಕಾರ ಮುಂದಾಗಿದ್ದು, ಈ ಕಾಮಗಾರಿಗೆ ಅರಣ್ಯ ಇಲಾಖೆಯ ನಿಯಮಗಳೂ ಸೇರಿದಂತೆ ಹಲವು ಅಡೆತಡೆಗಳಿವೆ. ಪ್ರವಾಸೋದ್ಯಮ ಅಭಿವೃದ್ಧಿಗೆ ಪೂರಕವಾಗುವಂತೆ ನಂದಿಬೆಟ್ಟದಲ್ಲಿ ಹಲವು ಚಟುವಟಿಕೆ ಹಮ್ಮಿಕೊಳ್ಳಲು ಕ್ರೀಡಾ ಇಲಾಖೆ ಮತ್ತು ಪ್ರವಾಸೋದ್ಯಮ ಇಲಾಖೆಗೆ ಸೂಚಿಸಲಾಗಿದೆ ಎಂದು ತಿಳಿಸಿದ್ದಾರೆ.

><><><><><><><><><

ನಿಪುಣ ಕರ್ನಾಟಕ ಅಡಿಯಲ್ಲಿ ಸ್ಟೆಮ್ ಅಭ್ಯರ್ಥಿಗಳಿಗೆ ಕಲಬುರಗಿ-ಶಹಾಬಾದ ರಸ್ತೆಯ ಶೆಟ್ಟಿ ಇನ್ಸ್ಟಿಟ್ಯೂಟ್ ಆಫ್ ಟೆಕ್ನಾಲಾಜಿ ಸಂಸ್ಥೆಯಲ್ಲಿ ಸೈಕೋಮೆಟ್ರಿಕ್ ಅಸೆಸ್ಮೆಂಟ್ ಮತ್ತು ಟೆಕ್ನಿಕಲ್ ಅಸೆಸ್ಮೆಂಟ್ ಆನ್‌ಲೈನ್ ಮೌಲ್ಯಮಾಪನ ಪರೀಕ್ಷೆ ಯಶಸ್ವಿಯಾಗಿ ನಡೆದಿದೆ. ಸುಮಾರು ೫೦೦೦ಕ್ಕೂ ಹೆಚ್ಚಿನ ಅಭ್ಯರ್ಥಿಗಳು ಈ ಪರೀಕ್ಷೆಯಲ್ಲಿ ಭಾಗವಹಿಸಿದ್ದರು. ರಾಜ್ಯದ ಟೈಯರ್ ೨ ಮತ್ತು ಟೈಯರ್ ೩ ನಗರಗಳಲ್ಲಿ ಪದವೀಧರರಲ್ಲಿ ಹೆಚ್ಚುತ್ತಿರುವ ಉದ್ಯೋಗಾವಕಾಶದ ಅಂತರವನ್ನು ಪರಿಹರಿಸಲು ಮಾಹಿತಿ ತಂತ್ರಜ್ಞಾನ ಹಾಗೂ ಜೈವಿಕ ತಂತ್ರಜ್ಞಾನ ಇಲಾಖೆ ಮತ್ತು ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮದ ಮೂಲಕ ಈ ಪರೀಕ್ಷೆ ನಡೆಸಲಾಗಿದ್ದು, ಅನ್‌ಸ್ಟಾಪ್ ಸಂಸ್ಥೆ ಸಂಪೂರ್ಣ ಪರೀಕ್ಷೆಯ ನಿರ್ವಹಣೆ ಕೈಗೊಂಡಿತ್ತು.

><><><><><><><><><

ಇಂದು ಕರಾವಳಿ ಸೇರಿದಂತೆ ಉತ್ತರ ಹಾಗೂ ದಕ್ಷಿಣ ಒಳನಾಡಿನ ಹಲವೆಡೆ ಧಾರಾಕಾರ ಮಳೆಯಾಗಿದೆ ರಾಜ್ಯದ ಹಲವೆಡೆ ಇಂದಿನಿಂದ ಇದೇ ೧೪ರವರೆಗೆ ಮುಂದಿನ ೭ ದಿನಗಳ ಕಾಲ ಕರಾವಳಿ ಉತ್ತರ ಒಳನಾಡು ದಕ್ಷಿಣ ಒಳನಾಡಿನಲ್ಲಿ ವ್ಯಾಪಕ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ನೆಚ್ಚರಿಕೆ ನೀಡಿದೆ. ಬೀದರ್ ಕಲ್ಬುರ್ಗಿ ಗದಗ ರಾಯಚೂರು ಚಿತ್ರದುರ್ಗ ಕೋಲಾರ ಕೊಡಗಿನಲ್ಲೂ ಇದೇ ೧೪ರವರೆಗೆ ಭಾರೀ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ. ಬೆಂಗಳೂರಿನಲ್ಲಿ ಇಂದು ಮಧ್ಯಾಹ್ನದಿಂದಲೇ ಭಾರೀ ಮಳೆಯಾಗುತ್ತಿದ್ದು, ಯೆಲ್ಲೋ ಅಲರ್ಟ್ ಘೋಷಿಸಲಾಗಿದೆ.

><><><><><><><><><